**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:-ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತಕ್ಕೆ 2007-08ನೇ ಸಾಲಿಗೆ ರಾಜ್ಯ ಹೆದ್ದಾರಿಗಳ 3 ವರ್ಷಗಳ ನಿರ್ವಹಣೆಗೆ 2ನೇ ಕಂತಿನಲ್ಲಿ ಅನುದಾನ ಒದಗಿಸುವ ಬಗ್ಗೆ.

ಓದಲಾಗಿದೆ:-1)ಸರ್ಕಾರದ ಸಮಸಂಖ್ಯೆ ಆದೇಶ ದಿನಾಂಕ 19-4-2007 ಮತ್ತು 22-9-2007.
2)ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ.ಕೆಆರ್‌ಡಿಸಿಎಲ್/ಎಂ.ಡಿ/2007-08 ದಿನಾಂಕ 06-10-2007.

**ಪ್ರಸ್ತಾವನೆ:-**

2007-08ನೇ ಸಾಲಿಗೆ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತಕ್ಕೆ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ "3054-03-337-0-05-200" ರಾಜ್ಯ ಹೆದ್ದಾರಿಗಳ ನಿರ್ವಹಣೆ (ಯೋಜನೇತರ) ಅಡಿಯಲ್ಲಿ ರೂ.108 ಕೋಟಿಗಳನ್ನು ನಿಗಧಿಪಡಿಸಲಾಗಿದೆ

2. ಓದಲಾದ (1) ಸರ್ಕಾರದ ಆದೇಶದಲ್ಲಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತಕ್ಕೆ 2007-08 ನೇ ಸಾಲಿಗೆ ರಾಜ್ಯ ಹೆದ್ದಾರಿಗಳ ನಿರ್ವಹಣೆಗಾಗಿ ಲೆಕ್ಕಶೀರ್ಷಿಕೆ "3054-03-337-0-05-200" ರಾಜ್ಯ ಹೆದ್ದಾರಿಗಳ ನಿರ್ವಹಣೆ (ಯೋಜನೇತರ) ಅಡಿಯಲ್ಲಿ ನಿಗಧಿಪಡಿಸಲಾದ ಅನುದಾನದಲ್ಲಿ ರೂ.72.00 ಕೋಟಿಗಳ ಅನುದಾನವನ್ನು ಈಗಾಗಲೇ ಬಿಡುಗಡೆ ಮಾಡಲಾಗಿದೆ.

3. ಓದಲಾದ (2) ರಲ್ಲಿನ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ದಿನಾಂಕ 06-10-2007ರ ಪತ್ರದಲ್ಲಿ ನಿಗಮದ ವತಿಯಿಂದ ಕೈಗೊಳ್ಳಲಾಗಿರುವ 3 ವರ್ಷಗಳ ರಾಜ್ಯ ಹೆದ್ದಾರಿಗಳ ನಿರ್ವಹಣೆ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸಲು ಬಾಕಿ ಇರುವ ರೂ.36.00 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡುವಂತೆ ಕೋರಲಾಗಿದೆ.

4. ಸದರಿ ಪ್ರಸ್ತಾವನೆಯನ್ನು ಸರ್ಕಾರದಲ್ಲಿ ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡ ಆದೇಶ ಹೊರಡಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ.ಲೋಇ 87 ಇಎಪಿ 2007 ಬೆಂಗಳೂರು ದಿನಾಂಕ 06-11-2007**

ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ ನಿಯಮಿತದಿಂದ ಕೈಗೊಳ್ಳಲಾಗುತ್ತಿರುವ ರಾಜ್ಯ ಹೆದ್ದಾರಿಗಳ 2005-08 ರವರೆಗಿನ ಮೂರು ವರ್ಷಗಳ ನಿರ್ವಹಣೆಗಾಗಿ 2007-08ನೇ ಸಾಲಿನ

ಆಯವ್ಯಯದಲ್ಲಿ ನಿಗದಿಪಡಿಸಲಾಗಿರುವ ರೂ.108 ಕೋಟಿಗಳ ಪೈಕಿ ಈಗಾಗಲೇ 72.00 ಕೋಟಿ ರೂ.ಗಳನ್ನು ಬಿಡುಗಡೆ ಮಾಡಲಾಗಿದ್ದು, ಮೂರನೇ ಕಂತಾಗಿ ರೂ.20.00 ಕೋಟಿಗಳನ್ನು (ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ) ಲೆಕ್ಕ ಶೀರ್ಷಿಕೆ "3054-03-337-0-05-200" ರಾಜ್ಯ ಹೆದ್ದಾರಿಗಳ ನಿರ್ವಹಣೆ (ಯೋಜನೇತರ) ಅಡಿಯಲ್ಲಿ ಬಿಡುಗಡೆ ಮಾಡಲಾಗಿದೆ.

2. ಮುಂದುವರೆದು, ಸದರಿ ಬಿಲ್ಲಿನ ಮೊತ್ತಕ್ಕೆ ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಎ) ಇವರ ಮೇಲು ರುಜು ಮಾಡಿಸುವುದು ಹಾಗೂ ಈ ಬಿಲ್ಲನ್ನು (ಸ್ವೀಕೃತದ ರಶೀತಿ) ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇಲ್ಲಿಂದ ಡ್ರಾ ಮಾಡತಕ್ಕದ್ದು.

3.ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ.ಲೋಇ/1016/ಆಕೋ.1/07 ದಿನಾಂಕ 06-11-2007 ರಲ್ಲಿನ ಸಹಮತಿಯೊಂದಿಗೆ ಹೊರಡಿಸಿದೆ.

4.ಮುಂದುವರೆದು, 2007-08 ನೇ ಸಾಲಿನ ಆಯವ್ಯಯದಲ್ಲಿ ಒದಗಿಸಲಾದ ಅನುದಾನದ ಮಿತಿಯೊಳಗೆ ವೆಚ್ಚವನ್ನು ನಿಯಂತ್ರಿಸಲು ತಿಳಿಸಲಾಗಿದೆ.

ಭಾರತದ ರಾಷ್ಟ್ರಪತಿಯವರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
M. Devi Prasad
6/11/07
(ಎಂ.ದೇವಿಪ್ರಸಾದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಲೋಕೋಪಯೋಗಿ ಇಲಾಖೆ (ಇಎಪಿ)

ಗೆ,
ಕಂಪೈಲರ್, ಕರ್ನಾಟಕ ರಾಜ್ಯ ಪತ್ರ, ಇವರಿಗೆ ರಾಜ್ಯ ಪತ್ರದ ಮುಂದಿನ ಪ್ರಕಟಣೆಯಲ್ಲಿ ಪ್ರಕಟಿಸಿ ಸದರಿ ಪ್ರತಿಗಳನ್ನು ಕಳುಹಿಸಲು ಕೋರಿ ಕಳುಹಿಸಿದೆ.

ಪ್ರತಿಯನ್ನು:-

1.ಮಹಾಲೇಖಪಾಲರು (ಅಕೌಂಟ್ಸ್) ಕರ್ನಾಟಕ, ಬೆಂಗಳೂರು
2.ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ
3.ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ
4.ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ
5.ಕಾರ್ಯದರ್ಶಿಗಳು, ಲೋಕೋಪಯೋಗಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆ
6.ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮ, ಬೆಂಗಳೂರು,
7.ಮುಖ್ಯ ಇಂಜಿನಿಯರ್ ಸಂಪರ್ಕ ಮತ್ತು ಕಟ್ಟಡ (ದಕ್ಷಿಣ) ಬೆಂಗಳೂರು

8. ಮುಖ್ಯ ಇಂಜಿನಿಯರ್ ಸಂಪರ್ಕ ಮತ್ತು ಕಟ್ಟಡ (ಉತ್ತರ) ಧಾರವಾಡ
9. ವಿಶೇಷಾಧಿಕಾರಿ ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಲೋಕೋಪಯೋಗಿ, ಇಲಾಖೆ (ಆರ್ಥಿಕ ಕೋಶ)
10. ಜಂಟಿ ನಿರ್ದೇಶಕರು, ಸ್ಟೇಟ್ ಹುಜೂರ್ ಟ್ರೆಷರಿ, ಕೆ.ಆರ್.ಸರ್ಕಲ್, ಬೆಂಗಳೂರು
11. ಉಪ ನಿರ್ದೇಶಕರು, ಟಿ.ಎನ್.ಎಮ್.ಸಿ. ಖನಿಜ ಭವನ, ಬೆಂಗಳೂರು
12. ಮಾಹಿತಿ ಅಧಿಕಾರಿ, ಐ.ಡಿ.ಎಸ್.ಸೆಲ್, ಲೋಕೋಪಯೋಗಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆ
13. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆ (ಸಮನ್ವಯ)
14. ಹೆಚ್ಚುವರಿ ಪ್ರತಿಗಳು